ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಷ್ಟ್ರೀಯ ಶಿಕ್ಷಣ ನೀತಿ-2020 ಅನ್ನು ಅನುಷ್ಠಾನಗೊಳಿಸುವ ಬಗ್ಗೆ

ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ):-

629(685) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದಲ್ಲಿ ರಾಷ್ಟ್ರೀಯ ನೀತಿ-2020 ಅನ್ನು ಯಾವ ಸಾಲಿನಿಂದ ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿದೆ;

(ಆ) ಇದನ್ನು ಪ್ರೌಢ ಶಿಕ್ಷಣದಲ್ಲಿ ಎಷ್ಟು ಹಂತಗಳಲ್ಲಿ ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗಿದೆ;

(ಇ) ರಾಷ್ಟ್ರೀಯ ನೀತಿ-2020ನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಅನುದಾನ ರಹಿತ, ಶಾಲಾ ಕಾಲೇಜುಗಳ ಆಡಳಿತ ಮಂಡಳಿಗಳನ್ನು ಹಾಗೂ ವಿಶ್ವಾಸಕ್ಕೆ ಶಿಕ್ಷಕರ ಸಂಘಟನೆಗಳನ್ನು ತೆಗೆದುಕೊಳ್ಳಲು ಕೈಗೊಂಡಿರುವ ಕ್ರಮಗಳೇನು;

(ಈ) ಸದರಿ ನೀತಿಯನ್ನು ಅನುಷ್ಠಾನಗೊಳಿಸುವ ಸಂದರ್ಭದಲ್ಲಿ ಪೂರ್ವ ಪ್ರಾಥಮಿಕ ಹಾಗೂ ಪ್ರಾಥಮಿಕ ಹಂತದ 8 ವರ್ಷದ ಶಿಕ್ಷಣವನ್ನು ಮಾತೃಭಾಷೆ/ಪ್ರಾದೇಶಿಕ ಭಾಷೆಯಲ್ಲಿ ನೀಡಲು ತೀರ್ಮಾನಿಸಲಾಗಿದೆಯೇ?